ಶ್ರೀ ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಬಂದಿದೆ.

ಆ) ಲಿಂಗಸುಗೂರು ತಾಲ್ಲೂಕಿನ ಡಿವೈಎಸ್‌ಪಿ ವಿಭಾಗ ಕಛೇರಿಯ ನೂತನ ಕಟ್ಟಡವನ್ನು ಪೊಲೀಸ್ ಇಲಾಖೆಯ ವಶದಲ್ಲಿರುವ ಸರ್ವೆ ನಂ.397/1 ರಲ್ಲಿ 4 ಎಕರೆ 24 ಗುಂಟೆ ಜಮೀನಿನಲ್ಲಿ ನಿರ್ಮಾಣ ಮಾಡುವ ಪ್ರಸ್ತಾವನೆಯು ರೂ.213 ಕೋಟಿ ವೆಚ್ಚದಲ್ಲಿ ರಾಜ್ಯದಲ್ಲಿ ವಸತಿಯೇತರ ಕಟ್ಟಡ ನಿರ್ಮಿಸುವ ಯೋಜನೆ (ಎನ್‌ಆರ್‌ಬಿ–2) ಯಲ್ಲಿ ಸೇರಿರುತ್ತದೆ. ಹಣಕಾಸಿನ ಲಭ್ಯತೆ ಅನುಗುಣವಾಗಿ ಎನ್‌ಆರ್‌ಬಿ–2 ಯೋಜನೆಗೆ ಮಂಜೂರಾತಿ ನೀಡುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

219 ಶ್ರೀ ಅಪ್ಪಾಸಾಹೇಬ (ಅಪ್ಪು) ಮಲ್ಲಪ್ಪ ಪಟ್ಟಣಶೆಟ್ಟಿ (ಬಿಜಾಪುರ ನಗರ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬಿಜಾಪುರ ನಗರವು ಜಿಲ್ಲಾ ಕೇಂದ್ರವಾಗಿದ್ದು, ದಿನ ಕಳೆದಂತೆ ನಗರವು ವಿಸ್ತಾರ / ವ್ಯಾಪ್ತಿಯನ್ನು ವಿಸ್ತರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹೆಚ್ಚುತ್ತಿರುವ ಜನಸಂಖ್ಯೆಗೆ ಅನುಗುಣವಾಗಿ ಪೊಲೀಸ್ ಠಾಣೆಗಳು ಇಲ್ಲದಿರುವುದನ್ನು ಸರ್ಕಾರ ಮನಗಂಡಿದೆಯೇ;

ಇ) ಇತ್ತೀಚೆಗೆ ಸಾರ್ವಜನಿಕರ ಮನೆಗಳು ನ್ಯಾಯಾಧೀಶರ ಹಾಗೂ ಪೊಲೀಸ್ ಅಧಿಕಾರಿಗಳ ಮನೆಗಳಲ್ಲಿ ಕಳ್ಳತನಗಳು ಹಾಗೂ ಅಪರಾಧಗಳು ನಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಈ) ಹಾಗಿದ್ದಲ್ಲಿ, ಬಿಜಾಪುರ ನಗರದ ಜಲ ನಗರದಲ್ಲಿ ಹೊಸದಾಗಿ ಪೊಲೀಸ್ ಠಾಣೆಯನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ;

ಉ) ಹಾಗಿದ್ದಲ್ಲಿ, ಅತಿ ಶೀಘ್ರವಾಗಿ ಪೊಲೀಸ್ ಠಾಣೆ ಪ್ರಾರಂಭ ಮಾಡಲು ಸರ್ಕಾರವು ಕ್ರಮ ವಹಿಸುವುದೆ?

ಶ್ರೀ ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಬಂದಿದೆ.

ಆ) ಹೌದು.

ಇ) ಬಂದಿದೆ.

ಈ) ಇದೆ.

ಉ) ಹಣಕಾಸಿನ ಲಭ್ಯತೆಯನ್ನನುಸರಿಸಿ ಇಲ್ಲಿ ಪೊಲೀಸ್ ಠಾಣೆ ಪ್ರಾರಂಭ ಮಾಡಲು ಪರಿಶೀಲಿಸಲಾಗುವುದು.

639 ಶ್ರೀ ಬಚ್ಚೇಗೌಡ ಕೆ.ಪಿ. (ಚಿಕ್ಕಬಳ್ಳಾಪುರ) : ಮಾನ್ಯ ಗೃಹ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕಬಳ್ಳಾಪುರವು ಜಿಲ್ಲಾ ಕೇಂದ್ರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಚಿಕ್ಕಬಳ್ಳಾಪುರ ನಗರವು ಜಿಲ್ಲಾ ಕೇಂದ್ರವಾಗಿದ್ದಲ್ಲಿ ಜನ ಸಂದಣಿ ಹೆಚ್ಚಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಇ) ಚಿಕ್ಕಬಳ್ಳಾಪುರ ನಗರದಲ್ಲಿ ಹೆಚ್ಚಿನ ವಾಹನ ದಟ್ಟಣೆಯಿಂದಾಗಿ ಸುಗಮ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಮುಂದಿದೆಯೇ?

ಈ) ಹಾಗಿದ್ದಲ್ಲಿ, ವಾಹನ ಸಂಚಾರದ ದಟ್ಟಣೆಯನ್ನು ತಡೆಗಟ್ಟಲು ನಗರದ ಪ್ರಮುಖ ರಸ್ತೆಗಳಲ್ಲಿ ಸಂಚಾರಿ ದೀಪಗಳನ್ನು ಅಳವಡಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ?

ಉ) ಹಾಗಿದ್ದಲ್ಲಿ, ಯಾವಾಗ ಸಂಚಾರಿ ದೀಪಗಳನ್ನು ಅಳವಡಿಸಲಾಗುವುದು (ವಿವರಗಳನ್ನು ನೀಡುವುದು);

ಊ) ಚಿಕ್ಕಬಳ್ಳಾಪುರದಲ್ಲಿ ಪ್ರತ್ಯೇಕ ಸಂಚಾರಿ ಪೊಲೀಸ್ ಠಾಣೆಯನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ;

ಋ) ಹಾಗಿದ್ದಲ್ಲಿ, ಎಂದಿನಿಂದ ಸಂಚಾರಿ ಪೊಲೀಸ್ ಠಾಣೆಯನ್ನು ತೆರೆಯಲಾಗುವುದು?

ಶ್ರೀ ಡಾ: ವಿ.ಎಸ್.ಆಚಾರ್ಯ (ಗೃಹ ಸಚಿವರು) :

ಅ) ಬಂದಿದೆ.

ಆ) ಬಂದಿದೆ.

ಇ) ಚಿಕ್ಕಬಳ್ಳಾಪುರ ನಗರದಲ್ಲಿ ವಾಹನ ದಟ್ಟಣೆಯಿಂದಾಗಿ ಸುಗಮ ಸಂಚಾರಕ್ಕೆ ತೊಂದರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆ.

ಈ) ಇಲ್ಲ.